# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 84 ಗ್ರಾಪಂಅ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:21-01-2020.

## ಸುತ್ತೋಲೆ

ವಿಷಯ: ರಾಜ್ಯದ ಗ್ರಾಮ ಪಂಚಾಯತಿಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ಸಂಗ್ರಹಿಸಿರುವ ತೆರಿಗೆ ಮೊತ್ತದ ಮೇಲೆ ವಿಧಿಸುವ ಆರೋಗ್ಯ, ಭಿಕ್ಷುಕರ ಮತ್ತು ಗ್ರಂಥಾಲಯ ಉಪಕರಗಳ ಮೊತ್ತವನ್ನು ಸಂಬಂಧಿಸಿದ ಇಲಾಖೆಗಳಿಗೆ ಪಾವತಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 939 ಗ್ರಾಪಂಅ 2016(1) ದಿನಾಂಕ: 19-11-2016.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 488 ಗ್ರಾಪಂಅ 2017, ದಿನಾಂಕ: 25-04-2017.
3. ಸರ್ಕಾರದ ಆದೇಶ ಸಂಖ್ಯೆ:ಇಡಿ 64 ಎಲ್‌ಐಬಿ 2015 ದಿನಾಂಕ: 26-02-2019.
4. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 1108 ಗ್ರಾಪಂಅ 2017 ದಿನಾಂಕ: 19-03-2019.

****

The Karnataka Health Cess Act 1962 ರ ಪ್ರಕರಣ 3 ರಡಿ ಸ್ಥಳೀಯ ಪ್ರಾಧಿಕಾರಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ವಿಧಿಸುವ ತೆರಿಗೆಯ ಮೇಲೆ ಪ್ರತಿ ಒಂದು ರೂಪಾಯಿಗೆ 15 ಪೈಸೆ ಆರೋಗ್ಯ ಉಪಕರ ವಿಧಿಸಿ, ವಸೂಲಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಪ್ರಕರಣ 4 ಎ ರಡಿ ಸ್ಥಳೀಯ ಪ್ರಾಧಿಕಾರಗಳು ಈ ರೀತಿ ವಸೂಲಿ ಮಾಡಿದ ಆರೋಗ್ಯ ಉಪಕರದ ಶೇ 10% ರಷ್ಟನ್ನು ಗ್ರಾಮ ಪಂಚಾಯತಿಗಳು ಉಪಯೋಗಿಸಿಕೊಳ್ಳಬಹುದಾಗಿದೆ. ಇನ್ನುಳಿದ ಉಪಕರದ ಮೊತ್ತವನ್ನು ಆರೋಗ್ಯ ಇಲಾಖೆಗೆ ಜಮಾ ಮಾಡಬೇಕಾಗಿರುತ್ತದೆ.

The Karnataka Public Libraries Act 1965 ರ ಪ್ರಕರಣ 30 ರಡಿ ಸ್ಥಳೀಯ ಪ್ರಾಧಿಕಾರಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ವಿಧಿಸುವ ತೆರಿಗೆಯ ಮೇಲೆ ಪ್ರತಿ ಒಂದು ರೂಪಾಯಿಗೆ ಕನಿಷ್ಠ 3 ಪೈಸೆಯಿಂದ ಗರಿಷ್ಠ 6 ಪೈಸೆವರೆಗೆ ಗ್ರಂಥಾಲಯ ಉಪಕರ ವಿಧಿಸಿ, ವಸೂಲಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಪ್ರಕರಣ 30(4) ರಡಿ ಸ್ಥಳೀಯ ಪ್ರಾಧಿಕಾರಗಳು ಈ ರೀತಿ ವಸೂಲಿ ಮಾಡಿದ ಗ್ರಂಥಾಲಯ ಉಪಕರದ ಶೇ 10% ರಷ್ಟನ್ನು ಗ್ರಾಮ ಪಂಚಾಯತಿಗಳು ಉಪಯೋಗಿಸಿಕೊಳ್ಳಬಹುದಾಗಿದೆ.

The Karnataka Prohibition of Beggary Act 1975 ಪ್ರಕರಣ 31 ರಡಿ ಸ್ಥಳೀಯ ಪ್ರಾಧಿಕಾರಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ವಿಧಿಸುವ ತೆರಿಗೆಯ ಮೇಲೆ ಪ್ರತಿ ಒಂದು ರೂಪಾಯಿಗೆ ಕನಿಷ್ಠ 3 ಪೈಸೆಯಂತೆ ಭಿಕ್ಷುಕರ ಉಪಕರ ವಿಧಿಸಿ, ವಸೂಲಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಪ್ರಕರಣ 31(3) ರಡಿ ಸ್ಥಳೀಯ ಪ್ರಾಧಿಕಾರಗಳು ಈ ರೀತಿ ವಸೂಲಿ ಮಾಡಿದ ಭಿಕ್ಷುಕರ ಉಪಕರದ ಶೇ 10% ರಷ್ಟನ್ನು ಗ್ರಾಮ ಪಂಚಾಯತಿಗಳು ಉಪಯೋಗಿಸಿಕೊಳ್ಳಬಹುದಾಗಿದೆ. ಇನ್ನುಳಿದ ಉಪಕರದ ಮೊತ್ತವನ್ನು ಸಮಾಜ ಕಲ್ಯಾಣ ಇಲಾಖೆಗೆ ಜಮಾ ಮಾಡಬೇಕಾಗಿರುತ್ತದೆ.

ಗ್ರಾಮ ಪಂಚಾಯತಿಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ವಿಧಿಸುವ ತೆರಿಗೆಯ ಮೇಲೆ ಪ್ರತಿ ಒಂದು ರೂಪಾಯಿಗೆ 10 ಪೈಸೆವರೆಗೆ ಶಿಕ್ಷಣ ಉಪಕರವನ್ನು ವಿಧಿಸಿ ವಸೂಲಿ ಮಾಡಲು ಕರ್ನಾಟಕ ಶಿಕ್ಷಣ ಕಾಯ್ದೆ, 1983 ರಲ್ಲಿ ಅವಕಾಶವಿರುವುದಿಲ್ಲ.

ಉಲ್ಲೇಖ(3) ರ ಸರ್ಕಾರದ ಆದೇಶದಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಿ ಆದೇಶಿಸಲಾಗಿದೆ. ಸದರಿ ಆದೇಶದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಧೀನದಲ್ಲಿರುವ ಗ್ರಾಮ ಪಂಚಾಯತಿ ಗ್ರಂಥಾಲಯಗಳ ಸಂಪೂರ್ಣ ನಿರ್ವಹಣೆಯನ್ನು ದಿನಾಂಕ:01-03-2019 ರಿಂದ ಜಾರಿಗೆ ಬರುವಂತೆ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಲಾಗಿರುತ್ತದೆ. ಅನುದಾನವನ್ನು ಒಳಗೊಂಡಂತೆ ಹಾಗೂ ಗ್ರಾಮ ಪಂಚಾಯತಿಗಳು ವಸೂಲಿ ಮಾಡುವ ಗ್ರಂಥಾಲಯ ಉಪಕರವನ್ನು ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಬಳಸಬೇಕೆಂದು ತಿಳಿಸಿರುತ್ತದೆ.

ಗ್ರಾಮ ಪಂಚಾಯತಿಗಳು ಇನ್ನು ಮುಂದೆ ಭೂಮಿ ಮತ್ತು ಕಟ್ಟಡಗಳ ಮೇಲೆ ಸಂಗ್ರಹಿಸಿದ ತೆರಿಗೆ ಮೊತ್ತದ ಮೇಲೆ ಈ ಕೆಳಕಂಡ ಉಪಕರಗಳನ್ನು ಸೇರಿಸಿ ಒಟ್ಟಾರೆ ಮೊತ್ತವನ್ನು ತಪ್ಪದೆ ವಸೂಲಿ ಮಾಡಿ ಉಪಕರಗಳನ್ನು ಸಂಬಂಧಿಸಿದ ಇಲಾಖೆಗಳಿಗೆ ಪಾವತಿಸಲು ಈ ಕೆಳಕಂಡಂತೆ ಕ್ರಮ ವಹಿಸುವಂತೆ ಸೂಚಿಸಿದೆ.

1. ಆರೋಗ್ಯ ಕರ – 15 %
2. ಗ್ರಂಥಾಲಯ ಕರ – 6%
3. ಭಿಕ್ಷುಕರ ಕರ – 3%

ಗ್ರಾಮ ಪಂಚಾಯತಿಗಳು ಮೇಲ್ಕಂಡಂತೆ ವಸೂಲಿ ಮಾಡುವ ಆರೋಗ್ಯ ಹಾಗೂ ಭಿಕ್ಷುಕರ ಉಪಕರದಲ್ಲಿ ಶೇ 10% ರಷ್ಟನ್ನು ಗ್ರಾಮ ಪಂಚಾಯತಿಗಳು ಉಪಯೋಗಿಸಿಕೊಂಡು ಇನ್ನುಳಿದ ಉಪಕರದ ಮೊತ್ತವನ್ನು ಆರೋಗ್ಯ ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಜಮಾ ಮಾಡಲು ತಿಳಿಸಿದೆ.

ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಧೀನದಲ್ಲಿರುವ ಗ್ರಾಮ ಪಂಚಾಯತಿ ಗ್ರಂಥಾಲಯಗಳ ಸಂಪೂರ್ಣ ನಿರ್ವಹಣೆಯನ್ನು ದಿನಾಂಕ:01–03–2019 ರಿಂದ ಜಾರಿಗೆ ಬರುವಂತೆ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಲಾಗಿರುತ್ತದೆ. ಗ್ರಾಮ ಪಂಚಾಯತಿಗಳು ವಸೂಲಿ ಮಾಡುವ ಗ್ರಂಥಾಲಯ ಉಪಕರವನ್ನು ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಬಳಸಬೇಕೆಂದು ಶಿಕ್ಷಣ ಇಲಾಖೆಯು ತಿಳಿಸಿರುವುದರಿಂದ ಗ್ರಾಮ ಪಂಚಾಯತಿಗಳು ಗ್ರಂಥಾಲಯ ಉಪಕರಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ಖಾತೆ ತೆರೆದು ವಸೂಲಿ ಮಾಡುವ ಗ್ರಂಥಾಲಯ ಉಪಕರ ಒಟ್ಟು ಮೊತ್ತವನ್ನು ಸದರಿ ಖಾತೆಗೆ ಜಮೆ ಮಾಡಿ ಗ್ರಂಥಾಲಯ ನಿರ್ವಹಣೆಗಾಗಿ ಉಪಯೋಗಿಸುವಂತೆ ತಿಳಿಸಿದೆ.

ಮೇಲೆ ವಿವರಿಸಿರುವಂತೆ ರಾಜ್ಯದ ಗ್ರಾಮ ಪಂಚಾಯತಿಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ಸಂಗ್ರಹಿಸಿದ ತೆರಿಗೆ ಮೊತ್ತದ ಮೇಲೆ ಸಂಗ್ರಹಿಸುವ ಆರೋಗ್ಯ, ಗ್ರಂಥಾಲಯ ಮತ್ತು ಭಿಕ್ಷುಕರ ಉಪಕರಗಳನ್ನು ಸಂಬಂಧಿಸಿದ ಇಲಾಖೆಗೆ ತಪ್ಪದೆ ಪಾವತಿಸಲು ಕ್ರಮ ವಹಿಸುವಂತೆ ತಿಳಿಸಿದೆ ಹಾಗೂ ಪಾವತಿಸದಿರಲು ಕಾರಣರಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಕರ್ನಾಟಕ ಸಿವಿಲ್ ಸೇವ (ಸಿಸಿಎ) ನಿಯಮಗಳು, 1957 ರನ್ವಯ ಶಿಸ್ತು ಕ್ರಮ ಜರುಗಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಿದೆ.

(ಎಸ್.ಎ.ಅಶ್ರಫುಲ್ಲ ಹಸನ್)
ನಿರ್ದೇಶಕರು (ಪಂ.ರಾಜ್–1) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
21/01/2020

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು.
2) ಎಲ್ಲಾ ಉಪಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತ್‌ಗಳು.
3) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
4) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ.
4) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
5) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿರವರು.
6) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.